**ಸಿಸಿ ಸಂಃ 337/2018**

**2 ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಹೊಸಕೋಟೆ**

| | |
|---|---|
| ಸಾಕ್ಷಿದಾರರ ಹೆಸರು :ಪ್ರಭಾಕರ್ | ಪಿ ಡಬ್ಲ್ಯೂ - 6 ಸಿ ಡಬ್ಲ್ಯೂ - 5 |
| ತಂದೆ ಹೆಸರುಃ ಸುಬ್ಬರಾಯಪ್ಪ | ಸಾಕ್ಷಿಗೆ ಪ್ರಮಾಣ ವಚನ ಭೋದಿಸಿದ ದಿ: **12.02.2026** |
| ವಯಸ್ಸುಃ 40 ವರ್ಷ | |
| ವೃತ್ತಿಃ ಕೆ.ಇ.ಬಿ | |
| ವಾಸ ಸ್ಥಳಃ ನೆಲವಾಗಿಲು | |

**ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರಿಂದಃ**

ನಿ.ಪಿ.3 ರಲ್ಲಿರುವ ಸಹಿಯನ್ನು ಸಾಕ್ಷಿಯು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು **Ex.P-3(ಸಿ)** ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ನಾನು ಪೋಲೀಸ್ ಠಾಣೆಯಲ್ಲಿ ಹೋದಾಗ ಪೋಲಿಸರ ಹೇಳಿಕೆಯ ಮೇರೆಗೆ ನಾನು ಸಹಿ ಮಾಡಿರುತ್ತೇನೆ. ನನ್ನ ಮುಂದೆ ಯಾವುದೇ ಪಂಚನಾಮೆ ಮಾಡಿರುವುದಿಲ್ಲ. ನನ್ನ ಮುಂದೆ ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ವಿಚಾರಿಸಬೇಕಾಗಿ ಎಪಿಪಿರವರು ಸಾಕ್ಷಿಯನ್ನು ಪಾಟೀ ಸವಾಲು ಮಾಡಬೇಕಾಗಿ ನ್ಯಾಯಾಲಯದಲ್ಲಿ ವಿನಂತಿಸಿದ ಮೇರೆಗೆ ಅನುಮತಿಯನ್ನು ನೀಡಿರುತ್ತದೆ.)**

**ಪಾಟೀ ಸವಾಲುಃ ಸರ್ಕಾರದ ಪರವಾಗಿ ಎಪಿಪಿ ರವರಿಂದಃ**

ದಿ.23.01.2018 ರಂದು ಬೆಳಗ್ಗೆ 11.00-12.00 ಗಂಟೆಯವರೆಗೆ ನಂದಗುಡಿ ಪೋಲಿಸ್ ಠಾಣೆಯ ಹಿಂಭಾಗ ಚಾ.ಸಾ.1 ಮತ್ತು ನನ್ನ ಸಮಕ್ಷಮ ಅಮಾನತ್ತು ಪಂಚನಾಮೆಯ ಕ್ರಮ ಜರುಗಿಸಿ

ಕೆ.ಎನ್.73-ಜೆ.3114 ಟಾಟಾ ಕಂಪನಿಯ ಲಾರಿಯನ್ನು ಅಮಾನತ್ತುಪಡಿಸಿಕೊಂಡು ನನ್ನ ಮತ್ತು ಚಾ.ಸಾ.1 ರವರ ಸಹಿ ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ** ಆರೋಪಿ ಪರ ವಕೀಲರು ಪಾಟೀ ಸವಾಲು ಇರುವುದಿಲ್ಲ ಎಂದು ಹೇಳಿದ್ದರಿಂದ, ಆರೋಪಿ ಪರ ಪಾಟೀ ಸವಾಲನ್ನು ಇಲ್ಲ ಎಂದು ಪರಿಗಣಿಸಲಾಯಿತು.

**ಮರು ವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಎಂ ಒ

2 ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ, ಹೊಸಕೋಟೆ